ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎ.ಜಿ.ಹೊಸಮನಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ರಾಯಭಾಗ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:**
1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/316/2007/ಎಆರ್ಇ-5, ದಿನಾಂಕ:21.09.2016
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/316/2007/ಎಆರ್ಇ-5 ದಿನಾಂಕ: 24.09.2016.

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರ ಪತ್ರದೊಂದಿಗೆ, ಕರ್ನಾಟಕ **ಲೋಕಾಯುಕ್ತ** ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ವಿವಿಧ ಯೋಜನೆಗಳಡಿಯಲ್ಲಿ ಮಂಜೂರು ಮಾಡಲಾಗಿದ್ದ ಅನುದಾನದಲ್ಲಿ, ಟಾಸ್ಕ ಫೋರ್ಸ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳದೇ, ರೂ.10 ರಿಂದ 15 ಲಕ್ಷಗಳ ಮೊತ್ತವನ್ನು ಹಣದುರುಪಯೋಗ ಪಡಿಸಿಕೊಂಡು, ಕಾರ್ಯಪಡೆ ಯೋಜನೆಯ(ಟಾಸ್ಕ ಫೋರ್ಸ) ಕಾಮಗಾರಿಗಳನ್ನು ಪೂರ್ಣವಾಗಿ ಮಾಡಿರುವುದಿಲ್ಲವೆಂದು, ಆರೋಪಿಸಿ, ಅಂದಿನ ಕಂದಾಯ ಸಚಿವರಾದ ಶ್ರೀ ವಸಂತರಾವ್ ಎಲ್.ಪಾಟೀಲ್, ಇವರು ನೀಡಿದ್ದ ದೂರಿನ ಮೇರೆಗೆ ಪ್ರಕರಣವನ್ನು ಸ್ವಯಂ ಪ್ರೇರಿತವಾಗಿ

ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(2) ರನ್ವಯ ತನಿಖೆಯನ್ನು ಕೈಗೊಳ್ಳಲಾಗಿದ್ದು, ಈ ದೂರಿನಂಶಗಳ ಬಗ್ಗೆ ರಾಯಭಾಗ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯವರಿಂದ ವರದಿಯನ್ನು ಕೇಳಲಾಗಿ, ಪ್ರತ್ಯುತ್ತರವಾಗಿ ಅವರು ದಿನಾಂಕ: 09.08.2007 ರಂದು ನೀಡಿದ ವರದಿಯಲ್ಲಿ, ಶ್ರೀ ಜಿ.ಸಿ.ಸರಿಕಾರ, ಮಾನ್ಯ ಶಾಸಕರು, ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 21.08.2006 ರಂದು ನಡೆದ ಕಾರ್ಯಪಡೆ ಯೋಜನೆ ಸಮಿತಿ ಸಭೆಯಲ್ಲಿ 28 ಕಾಮಗಾರಿಗಳಿಗೆ ಮಂಜೂರಾತಿ ನೀಡುವಂತೆ ಬೆಳಗಾವಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರಿಗೆ ತಿಳಿಸಲು ತೀರ್ಮಾನಿಸಲಾಗಿರುತ್ತದೆಂದು ತಿಳಿಸಿದ್ದು, ಈ ಬಗ್ಗೆ ಎದುರುದಾರರುಗಳ ಉತ್ತರವನ್ನು ಕೇಳಲಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೆಳಗಾವಿ, ಇವರು ಒಟ್ಟು-13,50,000/-ಗಳ ವೆಚ್ಚದಲ್ಲಿ ಒಟ್ಟು-37 ಕಾಮಗಾರಿಗಳನ್ನು ಕೈಗೊಳ್ಳಲು ಮಂಜೂರಾತಿ ನೀಡಿರುತ್ತಾರೆಂದು, ಹಾಗೂ ರೂ. 20,32400/-ಗಳನ್ನು ಕಾರ್ಯಪಡೆ ಯೋಜನೆಗೆ ಬೆಳಗಾವಿ ಜಿಲ್ಲಾ ಪಂಚಾಯತ್‌ನಿಂದ ಬಿಡುಗಡೆಯಾಗಿದ್ದು, ಈ ಪೈಕಿ ರೂ. 12,77,693/-ಗಳನ್ನು 31 ಕಾಮಗಾರಿಗಳಿಗೆ ಪಾವತಿಸಿದ್ದು, ಇನ್ನುಳಿದ ಮೊತ್ತವನ್ನು ಸಿಂಡಿಕೇಟ್ ಬ್ಯಾಂಕ್‌ನಲ್ಲಿ ಇರಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ತಿಳಿಸಿರುತ್ತಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ತಾಂತ್ರಿಕ ವಿಭಾಗದ ಮುಖ್ಯ ಅಭಿಯಂತರರಿಗೆ ದೂರನ್ನು ಉಲ್ಲೇಖಿಸಲಾಗಿದ್ದು, ಅಂತೆಯೇ ತಾಂತ್ರಿಕ ವಿಭಾಗದ ಕಾರ್ಯಕಾರಿ ಅಭಿಯಂತರರು ಇವರಿಂದ ತನಿಖೆಯನ್ನು ನಡೆಸಿ ವರದಿಯನ್ನು ಪಡೆಯಲಾಗಿದ್ದು, ಹಾಗೂ ದೂರಿನ ಬಗ್ಗೆ ಪೋಲಿಸ್ ನಿರೀಕ್ಷಕರು, ಇವರಿಂದಲೂ ಸಹ ವರದಿಯನ್ನು ಪಡೆಯಲಾಗಿರುತ್ತದೆ ಎಂದು ತಿಳಿಸುತ್ತಾ, ತನಿಖೆಯ ಸಮಯದಲ್ಲಿ ಸಂಗ್ರಹಿಸಲಾದ ದಾಖಲಾತಿಗಳಿಂದ ಈ ಕೆಳಕಂಡ ಅಂಶವು ಕಂಡು ಬಂದಿರುತ್ತದೆಂದು ವರದಿಸುತ್ತಾ, ರಾಯಭಾಗ ತಾಲ್ಲೂಕು ಪಂಚಾಯತ್‌ನ ಅಂದಿನ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಶ್ರೀ ಎ.ಜಿ.ಹೊಸಮನಿ, ಇವರು ಸರ್ಕಾರಿ ನೌಕರರಾಗಿ, ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ

ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ನಿಬಂಧಕರು, ರವರು ಕೋರಿರುತ್ತಾರೆ.

Executive Officer has issued utilisation certificate dt:02.06.2007 (Flag-D) In the utilisation certificate it is stated that an amount of Rs.7,54,437/- which is unspent and remaining has been surrendered to the Government. But Executive Officer in the reply de:09.08.2007 has stated that remaining amount of Rs.7,54,437/- is in Syndicate Bank Account. This clearly show that the remaining amount of Rs.7,54,437/- has been misappropriated without depositing/surrendering the amount to the Government. Therefore the reply of Executive Officer is not acceptable.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಅದರೊಂದಿಗಿನ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರಾದ, ಶ್ರೀ ಎ.ಜಿ.ಹೊಸಮನಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ರಾಯಭಾಗ, ಇವರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪಲೋಕಾಯುಕ್ತರು, ತಮ್ಮ ವರದಿಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸಿನಂತೆ, ಸದರಿ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ, ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು-1, ಇವರಿಗೆ ವಹಿಸಿಕೊಡಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 197 ವಿಸೇಬಿ 2016 ಬೆಂಗಳೂರು ದಿನಾಂಕ: 27-10-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ, ಎದುರುದಾರರಾದ ಶ್ರೀ ಎ.ಜಿ.ಹೊಸಮನಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ರಾಯಭಾಗ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ

ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

27/10/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ)/(ಎ&ಇ) ರವರ ಕಾರ್ಯದರ್ಶಿ ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೆಳಗಾವಿ.
4) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
5) ಸಂಬಂಧಿಸಿದ ಅಧಿಕಾರಿಗೆ.(ಮು.ಕಾ.ನಿ.ಅ.ಜಿಪಂ. ವಿಜಯಪುರ ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.